ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಮೈಸೂರು ಲ್ಯಾಂಪ್ಸ್ ಸಂಸ್ಥೆಯ ಬಗ್ಗೆ

ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-

189(249) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಲ್ಯಾಂಪ್ಸ್ ಸಂಸ್ಥೆಯನ್ನು ಮುಚ್ಚಲಾಗಿದೆಯೇ;

(ಆ) ಹಾಗಿದ್ದಲ್ಲಿ, ಸಂಸ್ಥೆಯಲ್ಲಿ ಉಳಿದಿರುವ ಸಿಬ್ಬಂದಿ ಎಷ್ಟು; ಯಾವ ಯಾವ ಸಂಸ್ಥೆಗಳಿಗೆ ನಿಯೋಜನೆ ಮಾಡಲಾಗಿದೆ; ಅಥವಾ ವರ್ಗಾಯಿಸಲಾಗಿದೆ; (ವಿವರ ನೀಡುವುದು)

(ಇ) ಮೈಸೂರು ಲ್ಯಾಂಪ್ಸ್ ಸಂಸ್ಥೆಯಲ್ಲಿ ನೌಕರರು ತಮ್ಮ ಡಿ.ಎ ಹಾಗೂ ಇನ್ನಿತರ ಸೌಲಭ್ಯಗಳನ್ನು ಪಡೆಯದೇ ಸಂಸ್ಥೆ ಉಳಿವಿಗೆಗಾಗಿ ನೀಡಿದ್ದು, ಇವರಿಗೆ ಸರ್ಕಾರದಿಂದ ನೆರವು ನೀಡಲಾಗುವುದೇ;

(ಈ) ಮೈಸೂರು ಲ್ಯಾಂಪ್ಸ್ ಸಂಸ್ಥೆಯ ಒಟ್ಟು ಆಸ್ತಿ ಮೌಲ್ಯ ಎಷ್ಟು; ಈ ಆಸ್ತಿಯನ್ನು ಯಾವ ಸಂಸ್ಥೆಗೆ ಪರಭಾರೆ ಮಾಡಲಾಗಿದೆ; ನೌಕರರು ಹಾಗೂ ಶೇರುದಾರರಿಗೆ ನೀಡಬೇಕಾಗಿರುವ ಹಣದ ಮೊತ್ತ ಎಷ್ಟು ? (ವಿವರ ನೀಡುವುದು)